# ಎಂಪಿಎಂ ಕಾಲೇಜು: ಸ್ಪೋಕನ್ ಇಂಗ್ಲಿಷ್ ತರಬೇತಿ ಸಮಾರೋಪ




ಕಾರ್ಕಳ, ಆ. 19 : ಎಂಪಿಎಂ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇತ್ತೀಚೆಗೆ ಸ್ಪೋಕನ್ ಇಂಗ್ಲೀಷ್ ತರಬೇತಿಯ ಸಮಾರೋಪ ಸಮಾರಂಭ ನಡೆಯಿತು. ಸಂಪನ್ಮೂಲ ವ್ಯಕ್ತಿ ಸ್ಟಾನಿಸ್ಲಾಸ್ ರೆಬೆಲ್ಲೊ ಮಾತನಾಡಿ, ಬದಲಾಗುತ್ತಿರುವ ಆಧುನಿಕ ಜಗತ್ತಿನಲ್ಲಿ ಆಂಗ್ಲಭಾಷೆ ಬಹಳ ಪ್ರಾಮುಖ್ಯತೆ ಹೊಂದಿದೆ. ವಿದ್ಯಾರ್ಥಿಗಳು ಕಲಿಕೆಯೊಂದಿಗೆ ಸಂವಹನ ಕಲೆಯನ್ನು ಮೈಗೂಡಿಸಿಕೊಳ್ಳಬೇಕೆಂದರು.

ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳು ವಿವಿಧ ಕ್ರಿಯಾತ್ಮಕ ಚಟುವಟಿಕೆಗಳನ್ನು ನಿರ್ವಹಿಸಿದರು.

ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಎಂ. ಅಧ್ಯಕ್ಷತೆ ವಹಿಸಿದ್ದರು. ಸ್ನಾತಕೋತ್ತರ ವಿಭಾಗದ ಸಂಚಾಲಕ ಪ್ರೊ। ವಿದ್ಯಾಧರ ಹೆಗ್ಡೆ ಎಸ್., ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಪ್ರೊ। ಜ್ಯೋತಿ ಎಲ್. ಜನ್ನೆ, ಸಹಾಯಕ ಪ್ರಾಧ್ಯಾಪಕ ಮಂಜುನಾಥ ಬಿ., ಮೈತ್ರಿ ಬಿ. ಹಾಗೂ ಪೂಜಾ ಶೆಣೈ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ನಿಶ್ಮಿತಾ ಸ್ವಾಗತಿಸಿ, ಜಾನುಪ್ರಿಯಾ ನಾಯರ್ ಕಾರ್ಯಕ್ರಮ ನಿರೂಪಿಸಿದರು. ಅಖಿಲೇಶ್ ವಂದಿಸಿದರು.